# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಹಿಂದುಳಿದ ವರ್ಗಗಳ ಮೀಸಲಾತಿ ಪಟ್ಟಿಯಲ್ಲಿ ಬರುವ ಈಡಿಗ, ಬಿಲ್ಲವ ಸೇರಿದಂತೆ 26 ಸಮುದಾಯಗಳ ಕುಲಶಾಸ್ತ್ರೀಯ ಅಧ್ಯಯನ ನಡೆಸುವ ಕುರಿತು..

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಸಕಇ 225 ಬಿಸಿಎ 2000, ದಿನಾಂಕ:30/03/2002.
2. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳೀದ ವರ್ಗಗಳ ಕಲ್ಯಾಣ ಸಚಿವರ ದಿನಾಂಕ:23.02.2023

* * * * *

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಹೊಸ ಕನೆಪದರ ಮತ್ತು ಭಾರತದ ಸಂವಿಧಾನದ ಅನುಚ್ಛೇದ-15(4)ರಂತೆ ವಿದ್ಯಾಸಂಸ್ಥೆಗಳಲ್ಲಿ ಪ್ರವೇಶ ಮತ್ತು 16(4)ರ ಮೇರೆಗೆ ನೇಮಕಾತಿಗಳಲ್ಲಿ ಮೀಸಲಾತಿಯನ್ನು ಕಲ್ಪಿಸಲು ಹಿಂದುಳಿದ ವರ್ಗಗಳನ್ನು ಗುರುತಿಸಿ ಜಾತಿ ಪಟ್ಟಿಯನ್ನು ಹೊರಡಿಸಲಾಗಿರುತ್ತದೆ. ಅದರನ್ವಯ ಸದರಿ ಜಾತಿ ಪಟ್ಟಿಯಲ್ಲಿ ಪ್ರವರ್ಗ 2'ಎ'ಯ ಕ್ರಮಸಂಖ್ಯೆ 4(a)ಯಿಂದ (z)ವರೆಗೆ ನಮೂದಾಗಿರುವ ಈಡಿಗ ಸೇರಿದಂತೆ ಒಟ್ಟು 26 ಜಾತಿಗಳಿಗೆ ಶೈಕ್ಷಣಿಕ ಹಾಗೂ ಉದ್ಯೋಗ ನೇಮಕಾತಿಗಳಲ್ಲಿ ಮೀಸಲಾತಿ ಕಲ್ಪಿಸಲಾಗಿದೆ.

ಮೇಲೆ (2)ರಲ್ಲಿ ಓದಲಾದ ಮಾನ್ಯ ಇಲಾಖಾ ಸಚಿವರ ಈಡಿಗ, ಬಿಲ್ಲವ, ನಾಮಧಾರಿ ಮತ್ತು 26 ಒಳಪಂಗಡಗಳ ಕುಲಶಾಸ್ತ್ರ ಅಧ್ಯಯನ ನಡೆಸಲು ಆದೇಶಿಸಲು ಹಾಗೂ ಸದರಿ ಅಧ್ಯಯನಕ್ಕೆ ರೂ.25ಲಕ್ಷಗಳ ಅನುದಾನವನ್ನು ಮಂಜೂರು ಮಾಡಿ ಆದೇಶ ಹೊರಡಿಸಲು ಆದೇಶಿಸಲಾಗಿರುತ್ತದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಹಿಂವಕ 100 ಬಿಸಿಎ 2023,**
**ಬೆಂಗಳೂರು, ದಿನಾಂಕ: 27.02.2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರಿ ಆದೇಶ ಸಂಖ್ಯೆ:ಸಕಇ 225 ಬಿಸಿಎ 2000, ದಿನಾಂಕ:30/03/2002ರ ಜಾತಿ ಪಟ್ಟಿಯಲ್ಲಿ ಪ್ರವರ್ಗ 2'ಎ'ರಲ್ಲಿ ಕ್ರಮಸಂಖ್ಯೆ 4(a)ಯಿಂದ (z) ವರೆಗೆ ಈಡಿಗ-ಬಿಲ್ಲವ ಸೇರಿದಂತೆ ನಮೂದಾಗಿರುವ ಒಟ್ಟು 26 ಜಾತಿಗಳ ಕುಲಶಾಸ್ತ್ರೀಯ ಅಧ್ಯಯನವನ್ನು 2023-24ನೇ ಸಾಲಿನಲ್ಲಿ ಒದಗಿಸುವ ಅನುದಾನದಲ್ಲಿ ಕೈಗೊಳ್ಳಲು ನಿರ್ದೇಶಕರು, ಡಿ. ದೇವರಾಜ ಅರಸು ಸಂಶೋಧನಾ ಸಂಸ್ಥೆ ಇವರಿಗೆ ಅನುಮತಿ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Shaheenparveen 27/02/2023

(ಶಾಹೀನ್ ಪರ್ವೀನ್. ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:
1. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.

......2

3. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ಬೆಂಗಳೂರು.
4. ನಿರ್ದೇಶಕರು, ಡಿ. ದೇವರಾಜ ಅರಸು ಸಂಶೋಧನಾ ಸಂಸ್ಥೆ, ಬೆಂಗಳೂರು

**ಪ್ರತಿ ಮಾಹಿತಿಗಾಗಿ:**

1. ಸನ್ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆರವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿ ಇವರ ಆಪ್ತ ಸಹಾಯಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಶಾಖಾ ರಕ್ಷಾ, ಕಡತ/ಹೆಚ್ಚುವರಿ ಪ್ರತಿ.

*********